# ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ನ್ಯಾಯಾಲಯ, ಕಲಘಟಗಿ

**ಸಿಸಿ ನಂ 55/2021**

ಸತ್ಯ ಪ್ರತಿಜ್ಞೆಯ ಮೇರೆಗೆ ದಿನಾಂಕ 18-09-2025 ರಂದು ಪ್ರಮಾಣ ಮಾಡಿಸಲಾಯಿತು

| | | | |
|---|---|---|---|
| ಸಾಕ್ಷಿಯ ಹೆಸರು | ಃ ಶರೀಫ್‌ಸಾಬ್ ಮಿಶ್ರಿಕೋಟಿ | | ಪ್ರಾ.ಸಾ ಃ 09 |
| ತಂದೆ ಃ ಗಂಡ ಹೆಸರು | ಃ ಅಲಿಸಾಬ್ | | ಚಾ.ಸಾ ಃ 10 |
| ವಯಸ್ಸು | ಃ 62 ವರ್ಷ | | |
| ಉದ್ಯೋಗ | ಃ ನಿವೃತ್ತ ಮುಖ್ಯ ಪೇದೆ. | | |
| ವಾಸಸ್ಥಳ | ಃ ನೂಲ್ವಿ, ಹುಬ್ಬಳ್ಳಿ ತಾಲೂಕ | | |

**ಮುಖ್ಯ ವಿಚಾರಣೆ ಃ ಮಾನ್ಯ ಸ.ಸ.ಅ. ರವರಿಂದಃ**

ನಾನು 2013 ರಿಂದ ಸಪ್ಟಂಬರ್ 2017 ರವರೆಗೆ ಕಲಘಟಗಿ ಪೋಲೀಸ ಠಾಣೆಯಲ್ಲಿ ಮುಖ್ಯ ಪೇದೆ ಎಂದು ಕರ್ತವ್ಯನಿರ್ವಹಿಸಿದ್ದೇನೆ.

ದಿನಾಂಕ 21.05.2017 ರಂದು ಠಾಣಾ ಪ್ರಭಾರದಲ್ಲಿದ್ದಾಗ ನ್ಯಾಯಾಲದಿಂದ ಬಂದ ಖಾಸಗಿ ದೂರನ್ನು ಸ್ವೀಕರಿಸಿ ಅದರ ಮೇರೆಗೆ ಠಾಣಾ ಗುನ್ನೆ ನಂ 184/2017 ರಂತೆ ಪ್ರಕರಣ ದಾಖಲಿಸಿಕೊಂಡು ಪ್ರಥಮ ವರ್ತಮಾನ ವರದಿಯೊಂದಿಗೆ ದೂರನ್ನು ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಪ್ರಥಮ ವರ್ತಮಾನ ವರದಿಯನ್ನು ನಿಪಿ-28, ಸಾಕ್ಷಿ ಸಹಿಯನ್ನು ನಿಪಿ-28(ಎ) ಎಂದು ಗುರುತಿಸಲಾಯಿತು. ಮುಂದಿನ ತನಿಖೆಯನ್ನು ಚಾಸಾ-11 ರವರಿಗೆ ವಹಿಸಿಕೊಟ್ಟಿರುತ್ತೇನೆ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ**

ಪ್ರಥಮ ವರ್ತಮಾನ ವರದಿಯನ್ನು ಯಾವ ಸಮಯಕ್ಕೆ ಕಳುಹಿಸಿಕೊಟ್ಟಿದ್ದೇನೆಂದು ಹೇಳಲು ಬರುವುದಿಲ್ಲ. ನ್ಯಾಯಾಲಯದಿಂದ ಬಂದ ಮಾಹಿತಿಯನ್ನು ದಿನಾಂಕ 21.05.2017 ರಂದು ಸಾಯಂಕಾಲ 4-00 ಗಂಟೆಗೆ ಪಡೆದುಕೊಂಡಿರುತ್ತೇನೆ.

**ಮರು ವಿಚಾರಣೆಃ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೆ ಸರಿ ಇದೆ.

ಹಿರಿಯ ದಿವಾಣಿ ನ್ಯಾಯಾಧೀಶರು,
ಕಲಘಟಗಿ.